ಕರ್ನಾಟಕ ವಿಧಾನ ಪರಿಷತ್ 09/3/2020

ಕರ್ನಾಟಕ ವಿಧಾನ ಪರಿಷತ್

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ	: 589
ಸದಸ್ಯರ ಹೆಸರು	: ಡಾ॥ ಜೈಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು)
ಉತ್ತರಿಸಬೇಕಾದ ದಿನಾಂಕ	: 09-03-2020
ಉತ್ತರಿಸುವ ಸಚಿವರು	: ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರು

ಕ್ರ ಸಂ	ಪ್ರಶ್ನೆ	ಉತ್ತರ
ಅ.	ಸರ್ಕಾರಿ ಶಾಲೆಗಳಲ್ಲಿ ಕಲಿಯುವ ವಿದ್ಯಾರ್ಥಿಗಳು ಕೀಳರಿಮೆ ಮತ್ತು ಹಿಂಜರಿಕೆಯಿಂದ ಬಳಲುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿರುವುದಿಲ್ಲ.
ಆ.	ಈ ಕೀಳರಿಮೆಗೆ ಸರ್ಕಾರಿ ಶಾಲೆಗಳ ಕಟ್ಟಡ/ ಭೋಧನಾ ಸೌಕರ್ಯ ಮತ್ತು ಶಾಲಾ ಪರಿಸರ ಕಾರಣವೇ; ಅಥವಾ ಪಠ್ಯಕ್ರಮ /ಬೋಧನಾ ವಿಧಾನ ಕಾರಣವೇ;	ಉದ್ಭವಿಸುವುದಿಲ್ಲ.
ಇ.	ವಿದ್ಯಾರ್ಥಿಗಳ ಹಾಗೂ ಪೋಷಕರ ಸಾಮಾಜಿಕ ಮತ್ತು ಆರ್ಥಿಕ ಸ್ಥಿತಿಗಳು ಕಾರಣವೇ ಎಂಬ ನಿಟ್ಟಿನಲ್ಲಿ ಅಧ್ಯಯನ ನಡೆಲಾಗಿದೆಯೇ; ನಡೆಸಿದ್ದಲ್ಲಿ ಕಂಡುಕೊಂಡ ಕಾರಣಗಳು ಮತ್ತು ಪರಿಹಾರಗಳೇನು?	ಸರ್ಕಾರಿ ಶಾಲೆಗಳಲ್ಲಿ ಹಾಗೂ ಖಾಸಗಿ ಉತ್ತಮ ಶಾಲೆಗಳಲ್ಲಿ ಕಲಿಕೆಯ ಅಂತರ ಇರುವುದು ಸರ್ಕಾರದ ಗಮನಕ್ಕೆ ಬಂದಿದೆ. ಪೋಷಕರ ಸಾಮಾಜಿಕ ಮತ್ತು ಆರ್ಥಿಕ ಸ್ಥಿತಿಗಳು ವಿದ್ಯಾರ್ಥಿಗಳ ಹಾಜರಾತಿ ಹಾಗೂ ವಿದ್ಯಾಭ್ಯಾಸ ಮುಂದುವರಿಕೆಯ ಮೇಲೆ ಬೀರುವ ಪರಿಣಾಮಗಳನ್ನು ಮಿತಿಗೊಳಿಸುವ ಸಂಬಂಧ ಸರ್ಕಾರದಿಂದ ಈ ಕೆಳಗಿನಂತೆ ಕ್ರಮಗಳನ್ನು ಕೈಗೊಳ್ಳಲಾಗಿದೆ. • ಸರ್ಕಾರಿ ಶಾಲಾ ವಿದ್ಯಾರ್ಥಿಗಳಲ್ಲಿ ಇಂಗ್ಲೀಷ್ ಕಲಿಕೆಯ ಕುರಿತು ಇರುವ ಹಿಂಜರಿಕೆಯನ್ನು ಹೋಗಲಾಡಿಸಲು ರಾಜ್ಯದ 1000 ಶಾಲೆಗಳಲ್ಲಿ Bilingual (ದ್ವಿಭಾಷಾ) ಮಾದರಿಯಲ್ಲಿ ಪಠ್ಯಕ್ರಮವನ್ನು ಕಲಿಸಲಾಗುತ್ತಿದೆ.

		• ಒಂದನೇ ತರಗತಿಯಿಂದಲೇ ಕನ್ನಡ ಹಾಗೂ ಇತರೆ ಅಲ್ಪಸಂಖ್ಯಾತ ಭಾಷಾ ಮಾಧ್ಯಮ ಶಾಲೆಗಳಲ್ಲಿ ಆಂಗ್ಲ ಭಾಷೆಯನ್ನು ಒಂದು ವಿಷಯವನ್ನಾಗಿ ಕಲಿಸಲು ಅವಕಾಶ ಕಲ್ಪಿಸಲಾಗಿದೆ. • ಮಕ್ಕಳ ದಾಖಲಾತಿ ಹೆಚ್ಚಿಸಲು ಶಾಲಾ ಶಿಕ್ಷಕರು ಮತ್ತು ಎಸ್.ಡಿ.ಎಂ.ಸಿ ಪದಾಧಿಕಾರಿಗಳು ಮನೆ ಮನೆಗೆ ಭೇಟಿ ನೀಡಿ ಹೆತ್ತವರ ಮನ ಒಲಿಸಲು ಪ್ರಯತ್ನಿಸಲಾಗುತ್ತಿದೆ • ಶಾಲಾ ಭೌತಿಕ ಸೌಲಭ್ಯಗಳನ್ನು ಉತ್ತಮ ಪಡಿಸಲಾಗುತ್ತಿದೆ. • 1ನೇ ತರಗತಿಯಿಂದ 3ನೇ ತರಗತಿಗೆ ನಲಿಕಲಿ ಪದ್ಧತಿಯನ್ನು ಅಳವಡಿಸಲಾಗಿದೆ ಹಾಗೂ ಸಂತಸದಾಯಕ ಕಲಿಕೆಗೆ ಒತ್ತು ನೀಡಲಾಗಿದೆ. • ಸರ್ಕಾರಿ ಪ್ರಾಥಮಿಕ/ಪ್ರೌಢಶಾಲಾ ಮಕ್ಕಳಿಗೆ ಉಚಿತ ಸಮವಸ್ತ್ರವನ್ನು ವಿತರಿಸಲಾಗುತ್ತಿದೆ. • 1 ರಿಂದ 10ನೇ ತರಗತಿಗಳ ಸರ್ಕಾರಿ ಮತ್ತು ಅನುದಾನಿತ ಶಾಲೆಗಳಿಗೆ ಉಚಿತ ಪಠ್ಯ ಪುಸ್ತಕಗಳನ್ನು ವಿತರಿಸಲಾಗುತ್ತಿದೆ. • ಉಚಿತ ಬೈಸಿಕಲ್: ಸರ್ಕಾರಿ ಮತ್ತು ಅನುದಾನಿತ ಶಾಲೆಗಳ 8ನೇ ತರಗತಿ ವಿದ್ಯಾರ್ಥಿಗಳಿಗೆ ಬೈಸಿಕಲ್ ವಿತರಣೆ ಮಾಡಲಾಗುತ್ತಿದೆ. • ಅಕ್ಷರ ದಾಸೋಹ ಮತ್ತು ಕ್ಷೀರಭಾಗ್ಯ ಕಾರ್ಯಕ್ರಮದಡಿ ಸರ್ಕಾರಿ ಮತ್ತು ಅನುದಾನಿತ ಶಾಲೆಗಳ ಎಲ್ಲಾ ವಿದ್ಯಾರ್ಥಿಗಳಿಗೆ ಬಿಸಿ ಊಟ ಮತ್ತು ಹಾಲು ನೀಡಲಾಗುತ್ತಿದೆ • ಶೂಭಾಗ್ಯ ಯೋಜನೆ: ಸರ್ಕಾರಿ ಶಾಲೆಗಳ ಎಲ್ಲಾ ವಿದ್ಯಾರ್ಥಿಗಳಿಗೆ ಒಂದು ಜೊತೆ ಶೂ ಮತ್ತು ಎರಡು ಜೊತೆ ಸಾಕ್ಸ್‌ಗಳನ್ನು ವಿತರಿಸಲಾಗುತ್ತಿದೆ. • ಮಕ್ಕಳ ಕಲಿಕೆಯನ್ನು ಉತ್ತಮಪಡಿಸಿ ಖಚಿತ ಪಡಿಸಿಕೊಳ್ಳಲು ಸರ್ಕಾರಿ ಶಾಲೆಗಳ 4 ರಿಂದ 9ನೇ

		ತರಗತಿ ವಿದ್ಯಾರ್ಥಿಗಳಿಗೆ ಅಭ್ಯಾಸ ಪುಸ್ತಕಗಳನ್ನು ವಿತರಿಸಲಾಗುತ್ತಿದೆ. • ಎಸ್.ಎ.ಟಿ.ಎಸ್ ವ್ಯವಸ್ಥೆ ಮೂಲಕ ವಿದ್ಯಾರ್ಥಿಗಳ ಸಾಧನೆಯನ್ನು ಪರಿಶೀಲಿಸಲಾಗುತ್ತಿದೆ. • ಪ್ರೌಢಶಾಲಾ ಅರ್ಹ ವಿದ್ಯಾರ್ಥಿಗಳಿಗೆ ಲ್ಯಾಪ್‌ಟಾಪ್ ವಿತರಣೆ ಮಾಡಲಾಗುತ್ತಿದೆ. • ಗ್ರಾಮಾಂತರ ಪ್ರದೇಶಗಳಲ್ಲಿ 74 ಆದರ್ಶ ವಿದ್ಯಾಲಯಗಳ ಸ್ಥಾಪನೆ ಮೂಲಕ ಗ್ರಾಮೀಣ ಮಕ್ಕಳಿಗೆ ಆಂಗ್ಲ ಮಾಧ್ಯಮದಲ್ಲಿ ಶಿಕ್ಷಣ ಪಡೆಯುವ ಅವಕಾಶ ಕಲ್ಪಿಸಲಾಗಿದೆ. • ಒಂದೇ ಕಾಂಪೌಂಡ್‌ನಲ್ಲಿರುವ ಅಥವಾ ಸಮೀಪದಲ್ಲಿರುವ 1 ರಿಂದ 12ನೇ ತರಗತಿಯವರೆಗೆ ಶಾಲೆಗಳನ್ನು ಒಟ್ಟುಗೂಡಿಸಿ ರಾಜ್ಯದಲ್ಲಿ 176 ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಆರಂಭಿಸಲಾಗಿದೆ. ಈ ಮೂಲಕ ಶಾಲಾ ಭೌತಿಕ ಹಾಗೂ ಶೈಕ್ಷಣಿಕ ಸೌಲಭ್ಯ ಹೆಚ್ಚಿಸಿ, ಗುಣಮಟ್ಟದ ಶಿಕ್ಷಣ ನೀಡಲು ಕ್ರಮ ಕೈಗೊಳ್ಳಲಾಗಿದೆ. • ಸರ್ಕಾರಿ ಶಾಲೆಯ ಆವರಣದಲ್ಲಿರುವ ಅಂಗನವಾಡಿ ಕೇಂದ್ರಗಳನ್ನು ಬಾಲಸ್ನೇಹಿ ಕೇಂದ್ರಗಳನ್ನಾಗಿ ಬಲವರ್ಧಿಸುವ ಹಾಗೂ ಪೂರ್ವ ಪ್ರಾಥಮಿಕ ತರಗತಿಗಳನ್ನು ಪ್ರಾರಂಭಿಸಲು ಕ್ರಮವಹಿಸಲಾಗುತ್ತಿದೆ.

ಇಪಿ 6 ಪಿಎಂಎ 2020

(ಎಸ್. ಸುರೇಶ್ ಕುಮಾರ್)

ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರು.